ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಸ್ಮಾರ್ಟ್‌ಸಿಟಿ ನಗರಗಳ ಯೋಜನೆಗಳ ಬಗ್ಗೆ

ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ(ಪದವೀಧರರ ಕ್ಷೇತ್ರ):-

1082 (1283) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸ್ಮಾರ್ಟ್‌ಸಿಟಿ ಎಂದರೇನು ; ಇದರ ರೂಪುರೇಷೆಗಳೇನು ; ಇದು ಯಾವಾಗಿನಿಂದ ಪ್ರಾರಂಭವಾಯಿತು ; (ವಿವರವಾದ ಮಾಹಿತಿ ನೀಡುವುದು)

(ಆ) ಕಳೆದ 3 ವರ್ಷಗಳಿಂದ ರಾಜ್ಯದಲ್ಲಿ ಎಷ್ಟು ನಗರಗಳನ್ನು ಸ್ಮಾರ್ಟ್‌ಸಿಟಿ ಯೋಜನೆಯಡಿ ಆಯ್ಕೆ ಮಾಡಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ತುಮಕೂರು ನಗರವನ್ನು ಸ್ಮಾರ್ಟ್‌ಸಿಟಿ ನಗರವನ್ನಾಗಿ ಆಯ್ಕೆ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಯಾವಾಗ ಆಯ್ಕೆ ಮಾಡಲಾಗಿದೆ;

(ಈ) ಇಲ್ಲಿಯವರೆಗೂ ತುಮಕೂರು ಸ್ಮಾರ್ಟ್‌ಸಿಟಿ ಯೋಜನೆಯಲ್ಲಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಇದರಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; ಖರ್ಚಾಗಿರುವ ಹಣವೆಷ್ಟು; ಮತ್ತು ಉಳಿದಿರುವ ಹಣ ಎಷ್ಟು ; (ಕಾಮಗಾರಿವಾರು ವಿವರವಾದ ಮಾಹಿತಿ ನೀಡುವುದು)

(ಉ) ಸ್ಮಾರ್ಟ್‌ಸಿಟಿಗೆ ಬಿಡುಗಡೆಯಾದ ಅನುದಾನದಲ್ಲಿ ಕೇಂದ್ರದ ಪಾಲೆಷ್ಟು; ಹಾಗೂ ರಾಜ್ಯ ಸರ್ಕಾರದ ಪಾಲೆಷ್ಟು ? (ವಿವರವಾದ ಮಾಹಿತಿ ನೀಡುವುದು)